ದಿಃ 16-09-2016 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಿ ಮುಖ್ಯ ವಿಚಾರಣೆಗೆ ಒಳಪಡಿಸಲಾಯಿತು.

<u>ಮುಖ್ಯ ವಿಚಾರಣೆಃ</u> ವಾದಿ ಪರವಾಗಿ ಶ್ರೀ ಬಿ.ಆರ್.ಎಸ್. ವಕೀಲರಿಂದ.

ಇಂದು ನಾನು ಮಾನ್ಯ ನ್ಯಾಯಾಲಯಕ್ಕೆ ನನ್ನ ಮುಖ್ಯ ವಿಚಾರಣೆ ಬದಲಿಗೆ ಪ್ರಮಾಣ ಪತ್ರವನ್ನು ಸಲ್ಲಿಸಿರುತ್ತೇನೆ. ಅದರಲ್ಲಿ ಬರೆದಿರುವ ಎಲ್ಲ ಅಂಶಗಳು ಸತ್ಯವಾಗಿರುತ್ತವೆ ಮತ್ತು ಸದ್ರಿ ಅಂಶಗಳನ್ನು ಓದಿ ತಿಳಿದುಕೊಂಡು ಸಹಿ ಮಾಡಿರುತ್ತೇನೆ.

ನಾನು ಮಾನ್ಯ ನ್ಯಾಯಾಲಯಕ್ಕೆ ಪಟ್ಟಣ ಪಂಚಾಯತ ಕಾರ್ಯಾಲಯ, ಹಳಿಯಾಳ ಇಲ್ಲಿ ದಿಃ 29-08-2013 ರಂದು ರೂ. 30,000-00 ಠೇವಣಿ ಇಟ್ಟಿರುವ ಕುರಿತು ರಸೀದಿಯನ್ನು ಹಾಜರಪಡಿಸಿದ್ದು, ಅದನ್ನು ನಿ.ಪಿ. 1 ಎಂದು ಗುರ್ತಿಸಲಾಯಿತು. ಪಟ್ಟಣ ಪಂಚಾಯತ ಕಾರ್ಯಾಲಯ, ಹಳಿಯಾಳ ಇಲ್ಲಿ ದಿಃ 29-08-2013 ರಂದು ರೂ. 27,065-00 ಠೇವಣಿ ಇಟ್ಟಿರುವ ಕುರಿತು ರಸೀದಿಯನ್ನು ಹಾಜರಪಡಿಸಿದ್ದು, ಅದನ್ನು ನಿ.ಪಿ. 2 ಎಂದು ಗುರ್ತಿಸಲಾಯಿತು. ಪಟ್ಟಣ ಪಂಚಾಯತ ಕಾರ್ಯಾಲಯ, ಹಳಿಯಾಳ ಇವರ ಆದೇಶ ದಿಃ 20-08-2013 ನೇದ್ದರ ಮೂಲ ಪ್ರತಿಯನ್ನು ಹಾಜರಪಡಿಸಿದ್ದು, ಅದನ್ನು ನಿ.ಪಿ. 3 ಎಂದು ಗುರ್ತಿಸಲಾಯಿತು. ದಿಃ 25-11-2013 ರಂದು ನಾನು ಮುಖ್ಯಾಧಿಕಾರಿ, ಪಟ್ಟಣ ಪಂಚಾಯತ, ಹಳಿಯಾಳ ಇವರಿಗೆ ನೀಡಿರುವ ಅರ್ಜಿಯ ಕಚೇರಿ ಪ್ರತಿಯನ್ನು ಹಾಜರಪಡಿಸಿದ್ದು, ಅದನ್ನು ನಿ.ಪಿ. 4 ಎಂದು ಗುರ್ತಿಸಲಾಯಿತು.

ಆದ್ದರಿಂದ ನನ್ನ ದಾವೆಯಲ್ಲಿ ತಿಳಿಸಿದಂತೆ ನನ್ನ ಪ್ರಾರ್ಥನೆಯನ್ನು ಪುರಸ್ಕರಿಸಬೇಕೆಂದು ವಿನಂತಿ ಇರುತ್ತದೆ.

(ಈ ಹಂತದಲ್ಲಿ ಪ್ರತಿವಾದಿ ಪರ ವಕೀಲರಾದ ಶ್ರೀ ಬಿ.ಎನ್.ಆರ್. ಇವರ ಪರವಾಗಿ ಶ್ರೀ ಜಿ.ಎಂ.ಎಸ್. ವಕೀಲರು ಪಾಟೀ ಸವಾಲಿಗಾಗಿ ಸಮಯ ಕೇಳಿದ್ದರಿಂದ ಸಮಯ ನೀಡಿ ಮುಂದೂಡಲಾಯಿತು).

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕಯಂತ್ರದ ಮೇಲೆ ಗಣಕೀಕರಿಸಿದೆ)

ಓ.ಹೇ.ಕೇ. ಸರಿ ಅದೆ.

ದಿವಾಣಿ ನ್ಯಾಯಾಧೀಶರು ಹಾಗೂ
ಪ್ರ.ದ.ನ್ಯಾ.ದಂ., ಹಳಿಯಾಳ.